## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಮಾನ್ಯ ಸದಸ್ಯರ ಹೆಸರು | : | ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| 2 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2172(2316) |
| 3 | ಉತ್ತರಿಸಬೇಕಾದ ದಿನಾಂಕ | : | 27.03.2026 |
| 4 | ಉತ್ತರಿಸುವ ಸಚಿವರು | : | ಕಾರ್ಮಿಕ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಕಾರ್ಮಿಕ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಇ.ಎಸ್.ಐ (ESI) ಆಸ್ಪತ್ರೆಗಳಿಗೆ ಪೂರೈಕೆ ಮಾಡಿರುವ ವೈದ್ಯಕೀಯ ಉಪಕರಣಗಳ ಖರೀದಿಯಲ್ಲಿ ನಡೆದಿರುವ ಬೃಹತ್ ಅವ್ಯವಹಾರದ ಕುರಿತು ಸಿ. ಎ. ಜಿ (CAG) ವರದಿಯಲ್ಲಿ ಆಕ್ಷೇಪ ವ್ಯಕ್ತಪರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ರಾಜ್ಯ ಕಾರ್ಮಿಕ ಇಲಾಖೆಯ ವ್ಯಾಪ್ತಿಯಡಿಯಲ್ಲಿ ಬರುವ ಇ.ಎಸ್.ಐ. ಆಸ್ಪತ್ರೆಗಳ ಉಪಕರಣಗಳ ಖರೀದಿಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಗಳ ಕುರಿತು ಸಿ.ಎ.ಜಿ ವರದಿಯಲ್ಲಿ ಸೇರ್ಪಡೆಯಾಗಬಹುದಾದಂತಹ ಕರಡು ಕಂಡಿಕೆಗಳ ವರದಿ ಸ್ವೀಕೃತವಾಗಿರುತ್ತದೆ. ಸದರಿ ಕಂಡಿಕೆಗಳಿಗೆ ಸಂಬಂಧಿಸಿದಂತೆ ದಿನಾಂಕ:25.07.2025 ರಂದು ಮಹಾಲೇಖಪಾಲರಿಗೆ ಮಾಹಿತಿಯನ್ನು ಒದಗಿಸಲಾಗಿರುತ್ತದೆ. ಅಂತಿಮ ವರದಿ ಸ್ವೀಕೃತವಾಗಿರುವುದಿಲ್ಲ. |
| ಆ) | ಹಾಗಿದ್ದಲ್ಲಿ, ಸಿ.ಎ.ಜಿ ವರದಿಯ ಅನ್ವಯ ಅಂದಾಜು ಎಷ್ಟು ಮೊತ್ತದ ಅವ್ಯವಹಾರ ನಡೆದಿದೆ; ಯಾವ ಯಾವ ಆಸ್ಪತ್ರೆಗಳಿಗೆ ಟೆಂಡರ್ ಪ್ರಕ್ರಿಯೆಯ ಯಾವೆಲ್ಲಾ ನಿಯಮಗಳನ್ನು ಉಲ್ಲಂಘಿಸಿ ಉಪಕರಣಗಳನ್ನು ಖರೀದಿಸಲಾಗಿದೆ; (ಖರೀದಿಸಲಾದ ಉಪಕರಣಗಳ ಪಟ್ಟಿ, ಆಸ್ಪತ್ರೆಗಳ ಹೆಸರು ಮತ್ತು ಸರ್ಕಾರಕ್ಕೆ ಆಗಿರುವ ಆರ್ಥಿಕ ನಷ್ಟದ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು) | ಇ.ಎಸ್.ಐ. ಆಸ್ಪತ್ರೆಗಳ ಉಪಕರಣಗಳ ಖರೀದಿಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರದ ಕುರಿತು ಆಕ್ಷೇಪ ವ್ಯಕ್ತಪಡಿಸಿರುವ ಸಿ.ಎ.ಜಿ. ಅಂತಿಮ ವರದಿಯು ಸ್ವೀಕೃತವಾಗಿರುವುದಿಲ್ಲ. |
| ಇ) | ಸಿ.ಎ.ಜಿ ವರದಿಯಲ್ಲಿನ ಈ ಗಂಭೀರ ಉಲ್ಲೇಖಗಳ ಹಿನ್ನೆಲೆಯಲ್ಲಿ ಸಾರ್ವಜನಿಕ ಹಣದ ಪೋಲು ಹಾಗೂ ಈ ಹಗರಣದ ಕುರಿತು ಸರ್ಕಾರದ ಯಾವುದಾದರೂ ಉನ್ನತ ಮಟ್ಟದ ತನಿಖೆಗೆ (ಸಿ.ಐ.ಡಿ / ಲೋಕಾಯುಕ್ತ) ಆದೇಶಿಸಿದೆಯೇ; ಆದೇಶಿಸಿದ್ದಲ್ಲಿ, ಪ್ರಸ್ತುತ ತನಿಖೆಯ ಯಾವ ಹಂತದಲ್ಲಿದೆ; (ವಿವರ ಒದಗಿಸುವುದು) | ಅಂತಿಮ ವರದಿ ಸ್ವೀಕೃತವಾದ ನಂತರ ಈ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮವಹಿಸಲಾಗುವುದು. |
| ಈ) | ಸಾರ್ವಜನಿಕ ಹಣದ ದುರ್ಬಳಕೆ ಹಾಗೂ ಕರ್ತವ್ಯಲೋಪ ಎಸಗಿ ಸದರಿ ಭ್ರಷ್ಟಾಚಾರದಲ್ಲಿ ಪ್ರತ್ಯಕ್ಷವಾಗಿ ಹಾಗೂ ಪರೋಕ್ಷವಾಗಿ ಭಾಗಿಯಾಗಿರುವ ಅಧಿಕಾರಿಗಳು, ಸಿಬ್ಬಂದಿವರ್ಗ ಹಾಗೂ | |

| | | |
|---|---|---|
| | ಪೂರೈಕೆದಾರರ (Suppliers) ವಿರುದ್ಧ ಸರ್ಕಾರ ಈವರೆಗೆ ಕೈಗೊಂಡಿರುವ ಕಾನೂನು ಹಾಗೂ ಶಿಸ್ತು ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು) | |

**ಕಡತ ಸಂಖ್ಯೆ: ಕಾಇ 89 ಎಲ್‌ಸ್‌ಐ 2026.**

**(ಸಂತೋಷ್ ಲಾಡ್)**
ಕಾರ್ಮಿಕ ಸಚಿವರು.